ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

DTE-ADM10ACM2/24/2022

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:13-05-2022.

-:: ಸುತ್ತೋಲೆ ::-

**ವಿಷಯ:** 2022-23ನೇ ಸಾಲಿನ ಸರ್ಕಾರಿ ಹಾಗೂ ಖಾಸಗಿ ಕಿರಿಯ ತಾಂತ್ರಿಕ ಶಿಕ್ಷಣ ಶಾಲೆಗಳಲ್ಲಿ 8ನೇ ತರಗತಿಯ ಪ್ರವೇಶಾತಿ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

**ಉಲ್ಲೇಖ:**
1. ಪ್ರಾಂಶುಪಾಲರು, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಬಾಗಲಕೋಟೆ ಇವರ ಪತ್ರ ಸಂ. ಸಕಿತಾಶಾಬಾ/ಪ್ರವೇಶ/2022-23/05, ದಿ:06-05-2022.
2. ಈ ಕಛೇರಿ ಪ್ರವೇಶಾಧಿಸೂಚನೆ ಪತ್ರ ದಿ:13-04-2022.

************

**2022-23ನೇ ಸಾಲಿನ ಸರ್ಕಾರಿ ಹಾಗೂ ಖಾಸಗಿ ಕಿರಿಯ ತಾಂತ್ರಿಕ ಶಿಕ್ಷಣ ಶಾಲೆಗಳಲ್ಲಿ** 8ನೇ ತರಗತಿಯ ಪ್ರವೇಶಕ್ಕೆ ಸಂಬಂಧಿಸಿದಂತೆ, ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಸ್ವೀಕರಿಸಲು **ದಿನಾಂಕ:12-05-2022** ಎಂದು ನಿಗಧಿಪಡಿಸಿ ದಿನಾಂಕ:14-05-2022ರ ಒಳಗೆ ಪ್ರವೇಶಾತಿಯನ್ನು ಪೂರ್ಣಗೊಳಿಸಲು ಉಲ್ಲೇಖಿತ ಈ ಕಛೇರಿ ಪ್ರವೇಶಾಧಿಸೂಚನೆಯಲ್ಲಿ ಸೂಚಿಸಲಾಗಿತ್ತು.

ಉಲ್ಲೇಖ(2)ರ ಪ್ರಾಂಶುಪಾಲರ ಪತ್ರದಲ್ಲಿ ರಾಜ್ಯದ ಪ್ರಾಥಮಿಕ ಶಾಲೆಗಳಿಗೆ ಬೇಸಿಗೆ ರಜೆಯನ್ನು ಘೋಷಿಸಿರುವುದರಿಂದ ಶಾಲೆಗಳು ತೆರೆದಿರುವುದಿಲ್ಲ ಇದರಿಂದಾಗಿ ವಿದ್ಯಾರ್ಥಿಗಳ ಅಂಕಪಟ್ಟಿ ಮತ್ತು ವರ್ಗಾವಣೆ ಪ್ರಮಾಣ ಪತ್ರಗಳು ವಿದ್ಯಾರ್ಥಿಗಳಿಗೆ ದೊರೆಯುವುದಿಲ್ಲವಾದ್ದರಿಂದ 8ನೇ ತರಗತಿಗೆ ಪ್ರವೇಶ ಪಡೆಯುವುದಕ್ಕೆ ತೊಂದರೆಯಾಗುತ್ತಿದೆ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆಯ ಇವರು ಈ ಸಾಲಿನ ಶಾಲಾ ದಾಖಲಾತಿಯನ್ನು 31-07-2022ರ ಒಳಗಾಗಿ ಮುಕ್ತಾಯಗೊಳಿಸಲು ಆದೇಶಿಸಿರುವುದರಿಂದ 8ನೇ ತರಗತಿ ಪ್ರವೇಶ ದಿನಾಂಕವನ್ನು ವಿಸ್ತರಿಸಬೇಕೆಂದು ಕೋರಿರುತ್ತಾರೆ. ಈ ಸಂಬಂಧದಲ್ಲಿ ಪ್ರಿನ್ಸಿಪಾಲರ ಮನವಿಯನ್ನು ಪರಿಗಣಿಸಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯ ಮೇರೆಗೆ **ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಸ್ವೀಕರಿಸಲು ದಿ:10-06-2022 ರವರೆಗೆ ಅವಧಿಯನ್ನು ವಿಸ್ತರಿಸಿ ಅನುಮತಿ ನೀಡಲಾಗಿದೆ.**

ಮೇಲೆ ನಮೂದಿಸಿರುವಂತೆ ಕೂಡಲೇ ಕ್ರಮ ತೆಗೆದುಕೊಂಡು ಈ ಬಗ್ಗೆ ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡಿ, ನಿಯಮಗಳ ಪ್ರಕಾರ ಪ್ರವೇಶ ಪ್ರಕ್ರಿಯೆಯನ್ನು ಪ್ರಿನ್ಸಿಪಾಲರು ತಮ್ಮ ಹಂತದಲ್ಲಿಯೇ ಅರ್ಹ ಅಭ್ಯರ್ಥಿಗಳ ಪ್ರವೇಶಾತಿಯನ್ನು ದಿನಾಂಕ:15-06-2022ರ ಒಳಗೆ ಪೂರ್ಣಗೊಳಿಸತಕ್ಕದ್ದು. **ಪ್ರಯುಕ್ತ, ಇದನ್ನು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ.**

**(ಕರಡು ಮಾನ್ಯ ಆಯುಕ್ತರಿಂದ ಅನುಮೋದಿಸಿದೆ)**

ಜಂ:ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ.

*ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಕಿರಿಯ ತಾಂತ್ರಿಕ ಶಾಲೆಗಳ ಪ್ರಿನ್ಸಿಪಾಲರಿಗೆ,*

ಪ್ರತಿ ಮಾಹಿತಿಗಾಗಿ:-

1. ಮಾನ್ಯ ಆಯುಕ್ತರ ಆಪ್ತಶಾಖೆಗೆ.
2. ಮಾನ್ಯ ನಿರ್ದೇಶಕರ ಆಪ್ತಶಾಖೆಗೆ.
3. ಜಂಟಿ ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ಕಾರ್ಯದರ್ಶಿಗಳು, ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು.
5. ಆಡಳಿತಾಧಿಕಾರಿಗಳು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
6. ಇ-ಆಡಳಿತ ವಿಭಾಗಕ್ಕೆ - ಆಯುಕ್ತಾಲಯದ ವೆಬ್‌ಸೈಟ್‌ನಲ್ಲಿ ಸದರಿ ಸುತ್ತೋಲೆಯನ್ನು ಪ್ರಚುರಪಡಿಸುವುದು.
7. ಡಿವಿಪಿ(2) ವಿಭಾಗಕ್ಕೆ - ಮಾಹಿತಿಗಾಗಿ. ಕಛೇರಿ ಪ್ರತಿ.